# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಜರ್ಮನ್ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರ (ಕೆ.ಜಿ.ಎಂ.ಎಸ್.ಡಿ.ಸಿ) ದ ಆಡಳಿತ ಪರಿಷತ್ ನ್ನು ಪುನರ್ ರಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಕೌಉಜೀಇ 306 ಕೈತಶಿ 2017 ದಿನಾಂಕ: 05/08/2017.
2. ಆಯುಕ್ತರು, ಕೈತಲು ಇಲಾಖೆ ಹಾಗೂ ಸದಸ್ಯ ಕಾರ್ಯದರ್ಶಿಗಳು, ಇವರ ಪತ್ರ ಸಂಖ್ಯೆ: ಕೆಜಿಎಸ್/ಇಎಸ್ಟಿ/ಜಿಸಿ/ವಿಸಿ/ಸಿಎಚ್/ಸಿಆರ್-09/2020-21, ದಿನಾಂಕ: 15/03/2021.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ.(1)ರ ಆದೇಶದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಜರ್ಮನ್ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರ (ಕೆ.ಜಿ.ಎಂ.ಎಸ್.ಡಿ.ಸಿ) ದ ಆಡಳಿತ ಪರಿಷತ್ತನ್ನು ರಚಿಸಲಾಗಿದೆ. ಮುಂದುವರೆದು, ಕರ್ನಾಟಕ ರಾಜ್ಯವು ಇತ್ತೀಚಿನ ವರ್ಷಗಳಲ್ಲಿ ಆರ್ಥಿಕ ಹಾಗೂ ಕೈಗಾರಿಕೋದ್ಯಮ ಕ್ಷೇತ್ರದಲ್ಲಿ ಗಮನಾರ್ಹ ಬೆಳವಣಿಗೆಯನ್ನು ಹೊಂದಿದ್ದು, ನುರಿತ ಕೌಶಲ್ಯಯುಕ್ತ ಮಾನವ ಸಂಪನ್ಮೂಲದ ಬೇಡಿಕೆಯೂ ಗಣನೀಯವಾಗಿ ಸಾಂಪ್ರದಾಯಿಕ ವಲಯಗಳಲ್ಲಿ ಹಾಗೂ ಮುಖ್ಯವಾಗಿ ಹೊಸದಾಗಿ ಹೊರಹೊಮ್ಮುತ್ತಿರುವ ತಾಂತ್ರಿಕ ವಲಯದಲ್ಲಿ ಹೆಚ್ಚಾಗಿರುತ್ತದೆ. ಆದ್ದರಿಂದ ರಾಜ್ಯದ ಯುವ ಜನರು ಉತ್ಪಾದನಾ ಹಾಗೂ ಸೇವಾಕ್ಷೇತ್ರದಲ್ಲಿ ಲಭ್ಯವಿರುವ ಉದ್ಯೋಗಾವಕಾಶಗಳನ್ನು ಪಡೆದುಕೊಳ್ಳಲು, ಉದ್ಯೋಗಾರ್ಹರನ್ನಾಗಿಸುವ ಅಗತ್ಯವಿದ್ದು, ಆಯಾ ಕ್ಷೇತ್ರದ ಬೇಡಿಕೆಗನುಗುಣವಾಗಿ ಕೌಶಲ್ಯತೆಯನ್ನು ಸಿದ್ಧಪಡಿಸುವುದು ಅಗತ್ಯವಿದೆ. ಈ ನಿಟ್ಟಿನಲ್ಲಿ 5 ಕೆ.ಜಿ.ಟಿ.ಟಿ.ಐ ಕೇಂದ್ರಗಳನ್ನು ಸ್ಥಾಪಿಸಿದ್ದು, ಗೌರಿಬಿದನೂರು ಮತ್ತು ಕಾರ್ಕಳ ದಲ್ಲಿ ವಿಸ್ತರಣಾ ಕೇಂದ್ರಗಳನ್ನು ಸಹ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದೆ. ಆದುದರಿಂದ ಈ ಎಲ್ಲಾ ಕೇಂದ್ರಗಳಿಗೆ ಸಿಬ್ಬಂದಿಗಳನ್ನು ತ್ವರಿತವಾಗಿ ನೇಮಕಾತಿ ಮಾಡಿಕೊಳ್ಳಲು, ಆಡಿಟ್ ವರದಿಯನ್ನು ಸಕಾಲದಲ್ಲಿ ಸಲ್ಲಿಸಲು, ಗೌರ್ನಿಂಗ್ ಕೌನ್ಸಿಲ್ ಸಭೆಗಳನ್ನು ನಡೆಸಲು ಹಾಗೂ ದಿನನಿತ್ಯದ ಆಡಳಿತಾತ್ಮಕ ಕೆಲಸ ಕಾರ್ಯಗಳನ್ನು ತ್ವರಿತಗತಿಯಲ್ಲಿ ನಿರ್ವಹಿಸುವ ಸಲುವಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಬದಲಿಗೆ ಸರ್ಕಾರದ ಕಾರ್ಯದರ್ಶಿಗಳು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಜರ್ಮನ್ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರ (ಕೆ.ಜಿ.ಎಂ.ಎಸ್.ಡಿ.ಸಿ) ದ ಆಡಳಿತ

--2

ಪರಿಷತ್ತನ್ನು ಪುನರ್ ರಚಿಸುವಂತೆ ಸದಸ್ಯ ಕಾರ್ಯದರ್ಶಿಗಳು, ಕೆ.ಜಿ.ಎಂ.ಎಸ್.ಡಿ.ಸಿ ಹಾಗೂ ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಇವರು ಕೋರಿರುತ್ತಾರೆ. ಸದರಿಯವರ ಪ್ರಸ್ತಾವನೆಯನ್ನು ಸರ್ಕಾರವು ಪರಿಗಣಿಸಿದ್ದು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ ಕೌಉಜೀಇ 59 ಕೈತಸೇ 2021 ಬೆಂಗಳೂರು, ದಿನಾಂಕ:14/06/2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿಯಲ್ಲಿ ಕರ್ನಾಟಕ ಜರ್ಮನ್ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರ (ಕೆ.ಜಿ.ಎಂ.ಎಸ್.ಡಿ.ಸಿ) ದ ಆಡಳಿತ ಪರಿಷತ್ತನ್ನು ಈ ಕೆಳಕಂಡಂತೆ ಪುನರ್ ರಚಿಸಿ ಆದೇಶಿಸಿದೆ.

| ಕ್ರ.ಸಂ. | ಹುದ್ದೆ | ಪದನಾಮ |
|---|---|---|
| 1. | ಅಧ್ಯಕ್ಷರು | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ |
| 2. | ಸದಸ್ಯ ಕಾರ್ಯದರ್ಶಿಗಳು | ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ |
| 3. | ಖಜಾಂಚಿ | ಅಪರ ನಿರ್ದೇಶಕರು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ |
| 4. | ಜಂಟಿ ಕಾರ್ಯದರ್ಶಿ | ಜಂಟಿ ಕಾರ್ಯದರ್ಶಿ ಕರ್ನಾಟಕ ಜರ್ಮನ್ ಬಹುಕೌಶಲ್ಯಾಭಿವೃದ್ಧಿ ಕೇಂದ್ರ |
| | **ಸದಸ್ಯರು** | |
| 5. | ಕೇಂದ್ರ ಸರ್ಕಾರದ ಪ್ರತಿನಿಧಿ | ಡಿ.ಜಿ.ಟಿ ನವದೆಹಲಿ ಇವರ ವತಿಯಿಂದ ಮೂವರು ಪ್ರತಿನಿಧಿಗಳು |
| 6. | ಆರ್ಥಿಕ ಇಲಾಖೆ | ಒಬ್ಬ ಪ್ರತಿನಿಧಿ |
| 7. | ಜಿ.ಟಿ.ಝಡ್-ಐಎಸ್ | ಇಬ್ಬರು ಪ್ರತಿನಿಧಿಗಳು |
| 8. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ | ಒಬ್ಬ ಪ್ರತಿನಿಧಿ |

| | | |
|---|---|---|
| ಕೈಗಾರಿಕೋದ್ಯಮಗಳ ಸಂಘ ಸಂಸ್ಥೆಗಳು | | |
| 9. | ಬೆಂಗಳೂರು ಛೇಂಬರ್ಸ್ ಆಫ್ ಇಂಡಸ್ಟ್ರಿಯಲ್ ಕಾಮರ್ಸ್(ಬಿಸಿಐಸಿ) | ಒಬ್ಬ ಪ್ರತಿನಿಧಿ |
| 10. | ಫೆಡರೇಷನ್ ಆಫ್ ಕರ್ನಾಟಕ ಛೇಂಬರ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರೀಸ್ (ಎಫ್.ಕೆ.ಸಿ.ಸಿ.ಐ) | ಒಬ್ಬ ಪ್ರತಿನಿಧಿ |
| 11. | ಕಾನ್ಫೆಡರೇಷನ್ ಆಫ್ ಇಂಡಿಯನ್ ಇಂಡಸ್ಟ್ರಿ (ಸಿ.ಐ.ಐ) | ಒಬ್ಬ ಪ್ರತಿನಿಧಿ |
| 12. | ಬಾಷ್ ಲಿಮಿಡೆಡ್ | ಒಬ್ಬ ಪ್ರತಿನಿಧಿ |
| 13. | ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ(ಜಿ.ಟಿ.ಟಿ.ಸಿ) | ಒಬ್ಬ ಪ್ರತಿನಿಧಿ |
| 14. | ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್ (ಬಿ.ಹೆಚ್.ಇ.ಎಲ್) | ಒಬ್ಬ ಪ್ರತಿನಿಧಿ |
| 15. | ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಹೆಚ್.ಎ.ಎಲ್) | ಒಬ್ಬ ಪ್ರತಿನಿಧಿ |
| 16. | ಟೊಯೋಟಾ ಟೆಕ್ನಿಕಲ್ ಟ್ರೈನಿಂಗ್ ಇನ್ಸಿಟಿಟ್ಯೂಟ್ (ಟಿ.ಟಿ.ಟಿ.ಐ) | ಒಬ್ಬ ಪ್ರತಿನಿಧಿ |
| 17. | ನೆಟ್ಟೂರು ಟೆಕ್ನಿಕಲ್ ಟ್ರೈನಿಂಗ್ ಫೌಂಡೇಷನ್ (ಎನ್.ಟಿ.ಟಿ.ಎಫ್) | ಒಬ್ಬ ಪ್ರತಿನಿಧಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, (ಎ&ಇ), (ಜಿ&ಎಸ್ಎಸ್ಎ), (ಇ&ಆರ್ಎಸ್ಎ) ಕರ್ನಾಟಕ ಬೆಂಗಳೂರು.
2) ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಹಾಗೂ ಸದಸ್ಯ ಕಾರ್ಯದರ್ಶಿಗಳು, ಕೆ.ಜಿ.ಎಂ.ಎಸ್.ಡಿ.ಸಿ, ಕೌಶಲ್ಯಭವನ, ಬೆಂಗಳೂರು.
3) ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.

4) ಉಪ ನಿರ್ದೇಶಕರು, ಖಜಾನೆ ಎನ್.ಎಂ.ಸಿ., ಖನಿಜಭವನ, ರೇಸ್‌ಕೋರ್ಸ್‌ರೋಡ್, ಬೆಂಗಳೂರು.
5) ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರ ಕಛೇರಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ವಿಕಾಸ ಸೌಧ.
6) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬೆಂಗಳೂರು.
8) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬೆಂಗಳೂರು.
9) ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬೆಂಗಳೂರು.
10) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.